**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ. ಸಂಖ್ಯೆ: 452/2025**

ಫ್ರಾಸಾ – 5

ಚಾಸಾ – 5

**ಸಾಕ್ಷಿಯು ದಿಃ 18.03.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಚನ್ನಬಸವಶೆಟ್ಟಿ |
| ತಂದೆಯ ಹೆಸರು | : | ಮಿಲೀಟ್ರಿ ಕಾಳಶೆಟ್ಟಿ |
| ವಯಸ್ಸು | : | 55 ವರ್ಷ |
| ವೃತ್ತಿ | : | ಕೂಲಿ |
| ವಾಸಸ್ಥಳ | : | ಭೀಮನಬಿಡು |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ಚಾಸಾ 1 ಮತ್ತು 4 ನಮ್ಮೂರಿನವರು ಗೊತ್ತು. ಸಾಕ್ಷಿಯು ನಿಪಿ 2 ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 2(ಬಿ) ಎಂದು ಗುರ್ತಿಸಲಾಯಿತು. ಸದರಿ ಸಹಿಯನ್ನು ಯಾವಾಗ ಎಲ್ಲಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ನಿಪಿ 2 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**<u>ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-</u>**

ದಿಃ 13.04.2021 ರಂದು ಬೆಳಿಗ್ಗೆ 10.15 ರಿಂದ 11.00 ಗಂಟೆ ಸಮಯದಲ್ಲಿ ಚಾಸಾ 1 ತೋರಿಸಿದ ಸ್ಥಳದಲ್ಲಿ ಚಾಸಾ 4 ಮತ್ತು ನನ್ನ ಸಮಕ್ಷಮ ಪೊಲೀಸರು ನಿಪಿ 2 ರಂತೆ ಪಂಚನಾಮೆ ಜರುಗಿಸಿ ಮುದ್ದೆ ಮಾಲು 1 ಕಲ್ಲನ್ನು ಅಮಾನತ್ತು ಪಡಿಸಿಕೊಂಡು ಸ್ಥಳದಲ್ಲಿ ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 2 ರ ವಿಚಾರಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ